ಹೆದ್ದಾರಿಯಲ್ಲಿನ ಅನುಮತಿಯಲ್ಲಿನ ವಿಳಂಬದಿಂದ ಅಂತಿಮವಾಗಿ ಮೇ–2009ರಲ್ಲಿ ಪಡೀಲು ಜಲ ಸಂಗ್ರಹಾಗಾರಕ್ಕೆ ತುಂಬೆಯಿಂದ ನೀರು ಸರಬರಾಜು ಮಾಡಲಾಯಿತು. ಮೇ–2009ರಿಂದಲೇ ಪ್ರಾಯೋಗಿಕವಾಗಿ ನೀರು ಸರಬರಾಜನ್ನು ಪಡೀಲಿನಿಂದ ಉಳ್ಳಾಲಕ್ಕೆ ನೀಡಲಾಗುತ್ತಿದೆ. ನಂತರ ಮನೆಗಳಿಗೆ ನಲ್ಲಿ ನೀರಿನ ಸಂಪರ್ಕ ವ್ಯವಸ್ಥೆಯನ್ನು ಕಲ್ಪಿಸುವ ಕಾಮಗಾರಿ ಉಳ್ಳಾಲ ನಗರದಲ್ಲಿ ಚಾಲನೆಗೊಂಡಿದ್ದು, ಇದೀಗ ಅಂದರೆ ಫೆಬ್ರವರಿ–2011ರಲ್ಲಿ ಮುಕ್ತಾಯವಾಗಿದೆ. ಉಳ್ಳಾಲದ ತೊಕ್ಕೊಟ್ಟು ಕಡೆಗೆ ರೈಲ್ವೆ ಹಳಿಗಳ ಮೇಲೆ ನೀರಿನ ಮುಖ್ಯ ಕೊಳವೆಗಳನ್ನು ಕೊಂಡೊಯ್ಯಲು ಪ್ರತ್ಯೇಕ ಸ್ಟೀಲ್ ಗರ್ಡರ್ ಬ್ರಿಡ್ಜ್ ನಿರ್ಮಾಣಕ್ಕೆ ದಕ್ಷಿಣ ರೈಲ್ವೆ ಇಲಾಖೆಯಿಂದ ಅನುಮತಿ ಪಡೆಯುವಲ್ಲಿ ವಿಳಂಬವಾಗಿ ಈ ಕಾಮಗಾರಿ 2010ರ ಜನವರಿಯಲ್ಲಿ ಮುಗಿದಿರುತ್ತದೆ.

ಈ) ಸರ್ಕಾರದ ಮಟ್ಟದಲ್ಲಿ ಹಾಗೂ ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ ಯೋಜನೆಯ ಪ್ರಗತಿ ಪರಿಶೀಲಿಸಿ ಸೂಕ್ತ ನಿರ್ಧಾರ ಕೈಗೊಳ್ಳಲಾಗಿದೆ.

ಬಂಟ್ವಾಳ ಪುರಸಭೆಯಲ್ಲಿ ಘನತ್ಯಾಜ್ಯ ವಿಲೇವಾರಿ

129 (384) ಖಾದರ್ ಯು.ಟಿ. (ಮಂಗಳೂರು): ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಂಟ್ವಾಳ ಪುರಸಭೆಯವರು ಘನತ್ಯಾಜ್ಯವನ್ನು ಶೇಖರಿಸಲು ಸಜಪನಡು ಗ್ರಾಮದಲ್ಲಿ ಜಮೀನು ಗುರುತಿಸಿರುವುದು ನಿಜವೇ;

ಆ) ಹಾಗಿದ್ದಲ್ಲಿ, ಈ ಪ್ರದೇಶದ ಪರಿಸರ ಹಾನಿಯ ಬಗ್ಗೆ ಸ್ಥಳೀಯರು ವಿರೋಧ ವ್ಯಕ್ತಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಘನತ್ಯಾಜ್ಯ ವಿಲೇವಾರಿಗೆ ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳುತ್ತಿದೆ ; (ವಿವರ ಒದಗಿಸುವುದು) ?

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು):

ಅ) ಹೌದು. ಸಜನಪಡು ಗ್ರಾಮದ ಕಂಚಿನಡ್ಕಪದವು ಎಂಬಲ್ಲಿ ಸರ್ವೆ ನಂ. 109/1ಪಿ1 ಮತ್ತು 110/1ಪಿ1ರಂತೆ ಒಟ್ಟು 8.55 ಎಕರೆ ಜಾಗವನ್ನು ಗುರುತಿಸಲಾಗಿದೆ.

ಆ) ಹೌದು.

ಇ) ಘನತ್ಯಾಜ್ಯ ವಸ್ತು ವಿಲೇವಾರಿಗಾಗಿ ಮಾರ್ಗಸೂಚಿರನ್ವಯ ಸದರಿ ಜಾಗಕ್ಕೆ ಈಗಾಗಲೇ ಆವರಣ ಗೋಡೆಯನ್ನು ನಿರ್ಮಿಸಿ ಕೊಳವೆ ಬಾವಿಯನ್ನು ಕೊರೆಯಲಾಗಿದೆ. ವೈಜ್ಞಾನಿಕವಾಗಿ ಘನತ್ಯಾಜ್ಯ ವಸ್ತು ವಿಲೇವಾರಿಗಾಗಿ ಟೆಂಡರ್ ಕರೆಯಲಾಗಿದೆ. ಘನತ್ಯಾಜ್ಯವನ್ನು ಬೇರ್ಪಡಿಸಿ, ಎಚ್.ಡಿ.ಪಿ.ಇ. ಲೈನರ್‌ವುಳ್ಳ ಪಿಟ್‌ಗಳಲ್ಲಿ ತ್ಯಾಜ್ಯವನ್ನು ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಲೀಚೆಟ್ ಸಂಗ್ರಹಣೆಗೆ ಲೀಚೆಟ್ ನಿರ್ಮಿಸಲು ಹಾಗೂ ಸದರಿ ನಿವೇಶನ ಸುತ್ತಲೂ ಗಿಡಗಳನ್ನು ನೆಡಲು ಕ್ರಮಕೈಗೊಳ್ಳಲಾಗುತ್ತಿದೆ.

ದಕ್ಷಿಣ ಕನ್ನಡ ಜಿಲ್ಲೆಯ ಮಂಗಳಾ ಕ್ರೀಡಾಂಗಣದ ಸಿಂಥೆಟಿಕ್ ಟ್ರ್ಯಾಕ್ ಕಾಮಗಾರಿ

130 (385) ಶ್ರೀ ಖಾದರ್ ಯು.ಟಿ. (ಮಂಗಳೂರು): ಮಾನ್ಯ ಪ್ರವಾಸೋದ್ಯಮ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಯುವಜನ ಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನ ಮಂಗಳಾ ಕ್ರೀಡಾಂಗಣದಲ್ಲಿ ಕ್ರೀಡಾ ಚಟುವಟಿಕೆಗೆ ನಿರ್ಮಿಸುತ್ತಿರುವ ಸಿಂಥೆಟಿಕ್ ಟ್ರ್ಯಾಕ್‌ನ ಕಾಮಗಾರಿ ಯಾವ ಹಂತದಲ್ಲಿದೆ;

ಆ) ಈ ಸಿಂಥೆಟಿಕ್ ಟ್ರ್ಯಾಕ್ ನಿರ್ಮಾಣಕ್ಕೆ ಸರ್ಕಾರ ಎಷ್ಟು ಹಣವನ್ನು ಮಂಜೂರು ಮಾಡಿದೆ; ಇದುವರೆವಿಗೂ ವೆಚ್ಚ ಮಾಡಿರುವ ಹಣವೆಷ್ಟು; (ವಿವರ ನೀಡುವುದು)

ಇ) ಈ ಕಾಮಗಾರಿಯು ಪೂರ್ಣಗೊಳ್ಳಲು ಕಾಲಮಿತಿ ನಿಗದಿಗೊಳಿಸಲಾಗಿದೆಯೇ ;

ಈ) ದಕ್ಷಿಣ ಕನ್ನಡ ಜಿಲ್ಲೆಯ ಸಂಸ್ಕೃತಿಯ ಅಂಗವಾದ 'ಕಂಬಳ' ಕ್ರೀಡೆಗೆ ಸರ್ಕಾರ ಅನುದಾನ ಬಿಡುಗಡೆ ಮಾಡುತ್ತಿದೆಯೇ;

ಉ) 'ಕಂಬಳ' ಕ್ರೀಡೆಯನ್ನು ಉತ್ತೇಜಿಸುವ ಉದ್ದೇಶ ಸರ್ಕಾರ ಹೊಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?